# www.theruralmirror.com



ಡಾ|ವಿಘ್ನೇಶ್ವರ ವರ್ಮುಡಿ

# ಪ್ರಾದೇಶಿಕ ಒಪ್ಪಂದಕ್ಕೆ ಬಲಿಯಾಯಿತೇ ಕಾಳು ಮೆಣಸು..?



ಸಂಬಾರ ಪದಾರ್ಥಗಳ ರಾಜ ಎಂದು ಕರೆಯಲ್ಪಡುವ ಕಾಳು ಮೆಣಸು ದಕ್ಷಿಣ ಭಾರತದ ಪ್ರಮುಖ ಬೆಳೆ.ಕಪ್ಪು ಬಂಗಾರವೆಂದು ಹೆಸರು ಪಡೆದಿರುವ ಇದು ಸಂಬಾರ ಪದಾರ್ಥಗಳಲ್ಲಿ ಶ್ರೇಷ್ಠವಾದದ್ದು.ಭಾರತದಲ್ಲಿ ಇದರ ಉತ್ಪಾದನೆ ಕರ್ನಾಟಕ, ಕೇರಳ, ತಮಿಳುನಾಡು,ಅಸ್ಸಾಂ,ಮೇಘಾಲಯ ಮುಂತಾದ ರಾಜ್ಯಗಳಲ್ಲಿ ಆಗುತ್ತಿದೆ.ಲಭ್ಯ ಇರುವ ಅಂಕಿ ಅಂಶಗಳ ಪ್ರಕಾರ ವಿಸ್ತೀರ್ಣ ಮತ್ತು ಉತ್ಪಾದನೆಯಲ್ಲಿ ಕರ್ನಾಟಕ ಮೊದಲನೇ ಸ್ಥಾನದಲ್ಲಿದ್ದು,ಬಳಿಕದ ಸ್ಥಾನಗಳು ಕೇರಳ,ತಮಿಳ್ನಾಡು ಅಸ್ಸಾಂಗಳದ್ದು ಆಗಿದೆ
ಭಾರತದಲ್ಲಿ ಒಟ್ಟಾಗಿ ಸುಮಾರು ಎರಡು ಲಕ್ಷದ ಇಪ್ಪತ್ತೆಂಟು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಇದರ ಕೃಷಿ ಆಗಿ ಉತ್ಪಾದನೆ ಸುಮಾರು ಅರುವತ್ತ ನಾಲ್ಕು ಸಾವಿರ ಟನ್ ಆಗಿದೆ.ಕಳೆದ ಸಾಲಿನಲ್ಲಿ ಇದರ ಉತ್ಪಾದನೆ ಹವಾಮಾನದ ವೈಪರೀತ್ಯದಿಂದಾಗಿ ಮತ್ತಷ್ಟು ಇಳಿಕೆ ಆಗಿದೆ.ಕೆಲವು ಪ್ರದೇಶಗಳಲ್ಲಿ ಕಾರ್ಮಿಕರ ಅಭಾವದಿಂದ ಮೆಣಸು ಕೊಯಿಯುವ ಕಾರ್ಯಗಳೂ ಸರಿಯಾಗಿ ಆಗಿಲ್ಲ.ಒಟ್ಟಾರೆಯಾಗಿ ಕಳೆದ ಸಾಲಿನಲ್ಲಿ ಉತ್ಪಾದನೆ ಮೊದಲಿನ ವರ್ಷಗಳಿಗೆ ಹೋಲಿಸಿದಾಗ ಇದು ತುಂಬಾ ಕಡಿಮೆ.
ಜಾಗತಿಕ ಮಟ್ಟದಲ್ಲಿ ಇದರ ಉತ್ಪಾದನೆಯಲ್ಲಿ ವಿಯೆಟ್ನಾಮ್ ಒಂದನೇ ಸ್ಥಾನದಲ್ಲಿದ್ದು,ಎರಡನೇ ಸ್ಥಾನದಲ್ಲಿ ಭಾರತವಿದೆ.ಇನ್ನುಳಿದಂತೆ ಇಂಡೋನೇಷಿಯಾ,ಬ್ರೆಜಿಲ್, ಮಲೇಶಿಯ,ಶ್ರೀಲಂಕಾ ಮುಂತಾದ ರಾಷ್ಟ್ರಗಳಲ್ಲಿ ಇದನ್ನು ಬೆಳೆಸಲಾಗುತ್ತಿದೆ.ಈ ಎಲ್ಲಾ ರಾಷ್ಟ್ರಗಳು ಇದನ್ನು ರಫ್ತು ಮಾಡುವುದರೊಂದಿಗೆ ಆಮದನ್ನು ಮಾಡುತ್ತಿವೆ.
ಸಾಮನ್ಯವಾಗಿ ಒಂದು ಉತ್ಪನ್ನದ ಉತ್ಪಾದನೆ ಕುಸಿದಾಗ ಅದರ ಬೆಲೆ ಏರಿಕೆ ಆಗುವುದು ಸಹಜ.ಇಲ್ಲಿ ಅದೇ ಆಗುತ್ತಿದ್ದರೂ ಇದೀಗ ಏರಿಳಿತಕ್ಕೆ ದಾರಿ ಆಗುತ್ತಿದೆ.ಕಾಳು ಮೆಣಸಿನ ಬೆಲೆ ಸಾಮಾನ್ಯವಾಗಿ ಜುಲೈನಿಂದ ಅಕ್ಟೋಬರ್,ನವೆಂಬರ್ ತನಕ ಏರು ಪ್ರವೃತ್ತಿಯನ್ನು ಈ ಮೊದಲು ತೋರಿಸುತ್ತಿದ್ದ ಕಾರಣ ಆ ಸಮಯದಲ್ಲಾದರೂ ಏರ ಬಹುದಾ ಎಂಬ ನಿರೀಕ್ಷೆ ಕೃಷಿಕರ ಮನದಲ್ಲಿದೆ.ಈಗಾಗಲೇ ಹೆಚ್ಚಿನ ಪ್ರಮಾಣದಲ್ಲಿ ಇದು ಮಾರುಕಟ್ಟೆಗೆ ಪ್ರವೇಶ ಮಾಡಿದ್ದು,ಆದ್ದರಿಂದ ಮುಂದೆ ಪೂರೈಕೆ ಪ್ರಮಾಣ ಕಡಿಮೆ ಆಗಿ ಬೆಲೆ ಏರಿಕೆಗೆ ಅವಕಾಶ ಆಗಬಹುದೋ ಎಂಬ ವಾತಾವರಣ ಮಾರುಕಟ್ಟೆಯಲ್ಲಿ ಮೂಡಿದೆ.

**ಹೆಚ್ಚಿನ ಓದಿಗೆ...**



**ಹೆಚ್ಚಿನ ಓದಿಗೆ...** www.theruralmirror.com